ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2019-20 ದಿನಾಂಕ: 31-12-2019

**ಪತ್ರಿಕಾ ಪ್ರಕಟಣೆ**

# ಅಗ್ಗದ ಅಥವಾ ಸಬ್ಸಿಡಿ ಮದ್ಯ ಪೂರೈಸುವ ಯಾವುದೇ ಪ್ರಸ್ತಾವನೆ ರಾಜ್ಯ ಸರ್ಕಾರದಲ್ಲಿಲ್ಲ : ಅಬಕಾರಿ ಸಚಿವರ ಸ್ಪಷ್ಟನೆ

ಬೆಂಗಳೂರು, ಡಿಸೆಂಬರ್ 31 ( ಕರ್ನಾಟಕ ವಾರ್ತೆ ) :

ರಾಜ್ಯದಲ್ಲಿ ಕಡಿಮೆ ದರದ ಮತ್ತು ಉತ್ತಮ ಗುಣ ಮಟ್ಟದ ಮದ್ಯ ಸರಬರಾಜಿಗೆ ಬೇಡಿಕೆ ಇದೆ ಎಂದು 2013 ರಿಂದಲೂ ಸರ್ಕಾರದಲ್ಲಿ ಪ್ರಸ್ತಾವನೆ ಇತ್ತು. ಆದರೆ, ತಾವು ಅಬಕಾರಿ ಸಚಿವರಾದ ನಂತರ ಇಂತಹ ಯಾವುದೇ ಪ್ರಸ್ತಾವನೆಯನ್ನು ಸರ್ಕಾರದ ಮುಂದೆ ಮಂಡಿಸಿರುವುದಿಲ್ಲ ಎಂದು ಅಬಕಾರಿ ಸಚಿವ ಹೆಚ್ ನಾಗೇಶ್ ಅವರು ಸ್ಪಷ್ಟಪಡಿಸಿದ್ದಾರೆ.

ಬಡಜನರು ಹೆಚ್ಚು ಬಳಕೆ ಮಾಡುವ ಕಡಿಮೆ ದರದ ಮದ್ಯವನ್ನು ಸಹಾಯಧನ ( ಸಬ್ಸಿಡಿ ) ದರದಲ್ಲಿ ಪೂರೈಕೆ ಮಾಡುವುದು ಸೂಕ್ತವಲ್ಲವೇ ? ಎಂಬ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಂದರ್ಭದಲ್ಲಿ ಇಂತಹ ಬೇಡಿಕೆಯು ಹಿಂದಿನಿಂದ ಇದೆ ಎಂದು ಉತ್ತರಿಸಿರುತ್ತೇನೆ. ಆದರೆ, ನನ್ನ ಈ ಹೇಳಿಕೆಯು ಕೆಲವು ಮಾಧ್ಯಮಗಳಲ್ಲಿ ವ್ಯತಿರಿಕ್ತವಾಗಿ ಬಿಂಬಿಸಲಾಗಿದೆ. ಪ್ರಸ್ತುತ ಅಗ್ಗದ ಅಥವಾ ಸಬ್ಸಿಡಿ ಮದ್ಯ ಪೂರೈಸುವ ಯಾವುದೇ ಪ್ರಸ್ತಾವನೆಯು ರಾಜ್ಯ ಸರ್ಕಾರದ ಪರಿಶೀಲನೆಯಲ್ಲಿ ಇಲ್ಲ ಎಂಬುದನ್ನು ಮತ್ತೊಮ್ಮೆ ಸ್ಪಷ್ಟಪಡಿಸಬಯಸುತ್ತೇನೆ ಎಂದು ಅಬಕಾರಿ ಸಚಿವರು ಹೇಳಿದ್ದಾರೆ.

ಅಬಕಾರಿ ಇಲಾಖೆಯ ನಿಯಮಗಳ ಪ್ರಕಾರ ಸಿ ಎಲ್ 2 (ಎಂ ಆರ್ ಪಿ ಔಟ್‌ಲೆಟ್ ಮತ್ತು ವೈನ್‌ಸ್ಟೋರ್ಸ್) ಗಳಲ್ಲಿ ರಾತ್ರಿ 10-30 ಗಂಟೆಯವರೆಗೆ ಮತ್ತು ಸಿ ಎಲ್ 9 ( ಬಾರ್ ಅಂಡ್ ರೆಸ್ಟೋರೆಂಟ್ ಹಾಗೂ ಪಬ್ ) ಗಳಲ್ಲಿ ಬೆಂಗಳೂರು ಪೋಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿ ಮಧ್ಯರಾತ್ರಿ 1-00 ಗಂಟೆಯವರೆಗೆ ಹಾಗೂ ಉಳಿದೆಡೆಗಳಲ್ಲಿ ರಾತ್ರಿ 11-30 ಗಂಟೆಯವರೆಗೆ ಮದ್ಯಪೂರೈಕೆಗೆ ಅವಕಾಶವಿದೆ ಎಂದು ಹೆಚ್ ನಾಗೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**********

ಡಿ ಪಿ ಎಂ

## ಡಾ ಬಿ ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ :

## ಇಬ್ಬರು ವ್ಯವಸ್ಥಾಪಕರೂ ಒಳಗೊಂಡಂತೆ ಎಂಟು ಅಧಿಕಾರಿಗಳ ಅಮಾನತ್ತು

ಬೆಂಗಳೂರು, ಡಿಸೆಂಬರ್ 31 ( ಕರ್ನಾಟಕ ವಾರ್ತೆ ) :

ಡಾ ಬಿ ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಬೆಂಗಳೂರು ನಗರ ಜಿಲ್ಲಾ ಕಚೇರಿಯಲ್ಲಿ 2016–17 ಹಾಗೂ 2017–18 ನೇ ಸಾಲಿನಲ್ಲಿ ಸ್ವಯಂ ಉದ್ಯೋಗ ಯೋಜನೆ ಮತ್ತು ಕೈಗಾರಿಕಾ ಸೇವಾ ವ್ಯವಹಾರ ಯೋಜನೆಯಡಿ ಪರಿಶಿಷ್ಠ ಜಾತಿಯ 115 ಫಲಾನುಭವಿಗಳಿಗೆ ಬಿಡುಗಡೆ ಮಾಡಲಾದ 6.30 ಕೋಟಿ ರೂ ಸಹಾಯಧನವನ್ನು ಫಲಾನುಭವಿಗಳ ಬದಲಾಗಿ ಮಧ್ಯವರ್ತಿಗಳಿಗೆ ವರ್ಗಾವಣೆ ಮಾಡಿ ಸರ್ಕಾರದ ಅನುದಾನವನ್ನು ದುರಪುಯೋಗ ಮಾಡಿರುವ ಆರೋಪದ ಮೇರೆಗೆ ಅಂದಿನ ಜಿಲ್ಲಾ ವ್ಯವಸ್ಥಾಪಕ ಹಾಗೂ ಇಂದಿನ ಉಪ ಪ್ರಧಾನ ವ್ಯವಸ್ಥಾಪಕ ಹೆಚ್ ಆರ್ ಅರುಣ್ ಕುಮಾರ್ ಮತ್ತು ಅಂದಿನ ಜಿಲ್ಲಾ ವ್ಯವಸ್ಥಾಪಕ ಹಾಗೂ ಇಂದಿನ ಉಪ ಪ್ರಧಾನ ವ್ಯವಸ್ಥಾಪಕ ಜೆ ಜಿ ಪದ್ಮನಾಭ ಅವರನ್ನು ರಾಜ್ಯ ಸರ್ಕಾರ ಅಮಾನತ್ತುಗೊಳಿಸಿದೆ.

ಅಲ್ಲದೆ, ಡಾ ಬಿ ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಕಚೇರಿ_ಅಧೀಕ್ಷಕಿ ಎಂ ಸಿ ಇಂದಿರಮ್ಮ, ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳಾದ ಪಿ ಮಲ್ಲೇಶ್ ಮತ್ತು ಎನ್ ಮುಕುಂದ, ದ್ವಿತೀಯ ದರ್ಜೆ ಸಹಾಯಕರಾದ ಕಲ್ಪನಾ ಮತ್ತು ಪುಟ್ಟೀರಯ್ಯ, ಅಂದಿನ ಪ್ರಭಾರ ತಾಲ್ಲೂಕು ಅಭಿವೃದ್ಧಿ ಅಧಿಕಾರಿ ಎಂ ಲಿಂಗಣ್ಣ ಅವರನ್ನು ಅಮಾನತ್ತುಗೊಳಿಸಲಾಗಿದೆ. ಜೊತೆಗೆ, ನಿಗಮದಲ್ಲಿ ಪ್ರಥಮ ದರ್ಜೆ ಸಹಾಯಕರ ಹುದ್ದೆಯಲ್ಲಿ ಹೊರಗುತ್ತಿಗೆ ಆಧಾರದ ಮೇರೆಗೆ ಕಾರ್ಯ ನಿರ್ವಹಿಸುತ್ತಿದ್ದ ಹೇಮಂತ್ ಕುಮಾರ್ ಅವರನ್ನೂ ಸೇವೆಯಿಂದ ವಜಾ ಮಾಡಲಾಗಿದೆ.

ಅಂತೆಯೇ, ಬೆಂಗಳೂರಿನ ಕೆನರಾ ಬ್ಯಾಂಕ್‌ನ ಕಲ್ಕರೆ ಶಾಖೆಯ ಅಂದಿನ ವ್ಯವಸ್ತಾಪಕರು ಹಾಗೂ ಇತರೆ ಬ್ಯಾಂಕ್ ಸಿಬ್ಬಂದಿಯೊಂದಿಗೆ ಷಾಮೀಲಾಗಿ ಮಧ್ಯವರ್ತಿಗಳಾದ ಗೋವಿಂದರಾಜು, ಮುರುಳಿ ಬಿನ್ ಗೋವಿಂದರಾಜು, ಸೈಯದ್ ಸಾಧಿಕ್, ಜಿಮರನ್ ಪಾಷಾ, ಅಮರ್, ಸತ್ಯನಾರಾಯಣ, ಜೆ ಶ್ರೀಧರ್, ಕೆ ಮಂಜುನಾಥ್, ಭುವನೇಶ್, ಕೋದಂಡರಾಮ ಹಾಗೂ ಜೀವರಾಜ್ ಅವರು ಒಟ್ಟಾರೆ 6.30 ಕೋಟಿ ರೂ ದುರುಪಯೋಗ ಮಾಡಿರುವುದು ಸರ್ಕಾರವು ಕೈಗೊಂಡ ತನಿಖೆಯಲ್ಲಿ ಕಂಡು ಬಂದಿರುವ ಹಿನ್ನಲೆಯಲ್ಲಿ ಬೆಂಗಳೂರಿನ ಮಾಗಡಿ

ರಸ್ತೆಯ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ. ಅಲ್ಲದೆ, ಈ ಎಲ್ಲಾ ಆರೋಪಿಗಳ ವಿರುದ್ಧ ಐ ಪಿ ಸಿ ಪರಿಚ್ಛೇಧ 408, 419, 420 ಓದಲಾದ 149 ಪ್ರಕಾರ ನ್ಯಾಯಾಲಯದಲ್ಲಿ ಮೊಕದ್ದಮೆಯನ್ನೂ ಹೂಡಲಾಗಿದೆ ಎಂದು ಡಾ ಬಿ ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಬೆಂಗಳೂರು ನಗರ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸಾರ್ವಜನಿಕ ಗ್ರಂಥಾಲಯ ಇಲಾಖೆ**

**ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಗೆ ಪುಸ್ತಕಗಳ ಆಹ್ವಾನ**

**********

**ಬೆಂಗಳೂರು, ಡಿಸೆಂಬರ್ 31 ( ಕರ್ನಾಟಕ ವಾರ್ತೆ )** : 2019ನೇ ಸಾಲಿನಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಗೊಂಡ ಕನ್ನಡ, ಆಂಗ್ಲ ಮತ್ತು ಭಾರತೀಯ ಇತರೆ ಭಾಷೆಯ ಪುಸ್ತಕಗಳನ್ನು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಗೆ ಆಯ್ಕೆಗಾಗಿ ಸಲ್ಲಿಸಲು ಜನವರಿ 30 ಕೊನೆಯ ದಿನವಾಗಿದೆ.

2019ನೇ ಸಾಲಿನಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟವಾದ ಪುಸ್ತಕಗಳನ್ನು ಗ್ರಂಥಸ್ವಾಮ್ಯ ವಿಭಾಗ, ರಾಜ್ಯಕೇಂದ್ರ ಗ್ರಂಥಾಲಯ, ಕಬ್ಬನ್ ಉದ್ಯಾನವನ, ಬೆಂಗಳೂರು ಇಲ್ಲಿ ದಿನಾಂಕ: 30–01–2020 ರೊಳಗೆ ಕಾಫಿರೈಟ್ ಮಾಡಿಸಿರತಕ್ಕದ್ದು.

ಕಾಫಿರೈಟ್ ಮಾಡಿಸಿರುವ ಪುಸ್ತಕಗಳನ್ನು ಆಯ್ಕೆಗಾಗಿ ಅರ್ಜಿಯೊಂದಿಗೆ ಪುಸ್ತಕದ ಒಂದು ಪ್ರತಿಯನ್ನು ಹಾಗೂ ಡಿಜಿಟಲ್ ಗ್ರಂಥಾಲಯ ಸೇವೆಯನ್ನು ಸಾರ್ವಜನಿಕ ಓದುಗರಿಗೆ ಒದಗಿಸಲು ಅನುಕೂಲವಾಗುವಂತೆ ಆಸಕ್ತಿಯುಳ್ಳ ಲೇಖಕರು, ಲೇಖಕ–ಪ್ರಕಾಶಕರು ಮತ್ತು ಪ್ರಕಟಣಾ ಸಂಸ್ಥೆಗಳು ಪುಸ್ತಕವನ್ನು ಆಯ್ಕೆಗೆ ಸಲ್ಲಿಸುವಾಗ ತಮ್ಮ ಅನುಮತಿ ಪತ್ರದೊಂದಿಗೆ ಸದರಿ ಪುಸ್ತಕದ ಸಾಫ್ಟ್ ಕಾಫಿಯನ್ನು ಸಿ.ಡಿ ರೂಪದಲ್ಲಿ (ನೋಂದಣಿ ಪತ್ರದ ಪ್ರತಿಯೊಂದಿಗೆ) ನಿರ್ದೇಶಕರು, ಸಾರ್ವಜನಿಕಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯಗೋಪುರ, 4ನೇ ಮಹಡಿ, ಡಾ: ಅಂಬೇಡ್ಕರ್ ವೀಧಿ, ಬೆಂಗಳೂರು–560001 ಇಲ್ಲಿಗೆ **ದಿನಾಂಕ: 31-01–2020 ರೊಳಗೆ** ಸಲ್ಲಿಸುವುದು.

ತದನಂತರ ಬಂದ ಯಾವುದೇ ಪುಸ್ತಕಗಳನ್ನು ಸ್ವೀಕರಿಸಲಾಗುವುದಿಲ್ಲ. ನಿಗದಿತ ಅರ್ಜಿ ನಮೂನೆ ಮತ್ತು ನಿಬಂಧನೆಗಳ ಮಾಹಿತಿಗಾಗಿಇಲಾಖಾ ಅಂತರ್ಜಾಲ www.karnatakapubliclibrary.gov.in ಹಾಗೂ ರಾಜ್ಯದ ಎಲ್ಲಾ ಜಿಲ್ಲಾ/ನಗರಕೇಂದ್ರ ಗ್ರಂಥಾಲಯಗಳ ಉಪನಿರ್ದೇಶಕರು/ಮುಖ್ಯಗ್ರಂಥಾಲಯಾಧಿಕಾರಿಗಳ ಕಛೇರಿಗಳಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಈ ಕಛೇರಿಯದೂರವಾಣಿ 080–22864990, 22867358 ಸಂಪರ್ಕಿಸಲು ಸಾರ್ವಜನಿಕ ಗ್ರಂಥಾಲಯ ಇಲಾಖೆ ಪ್ರಕಟಣೆ ತಿಳಿಸಿದೆ.

**ಸಚಿವರ ಪ್ರವಾಸ**

**********

**<u>ಬೆಂಗಳೂರು, ಡಿಸೆಂಬರ್ 31 ( ಕರ್ನಾಟಕ ವಾರ್ತೆ )</u> : ವಸತಿ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಜನವರಿ 3 ರಿಂದ 5ರ ವರೆಗೆ ಮೈಸೂರು, ಮಡಿಕೇರಿ, ಹಳೇಬೀಡು ಪ್ರವಾಸ ಕೈಗೊಂಡು ವಿವಿಧ ಕಾರ್ಯಕ್ರಮ ಹಾಗೂ ಸಭೆಗಳಲ್ಲಿ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.**

## ಮುಂದಿನ ಬಜೆಟ್ ನಲ್ಲಿ ಪ್ರವಾಹದಿಂದ ಹಾನಿಗೊಳಗಾದ ರಸ್ತೆಗಳ ಮರುನಿರ್ಮಾಣಕ್ಕೆ ಆದ್ಯತೆ : ಶ್ರೀ ಗೋವಿಂದ ಎಂ ಕಾರಜೋಳ

**<u>ಬೆಂಗಳೂರು, ಡಿಸೆಂಬರ್ 31 ( ಕರ್ನಾಟಕ ವಾರ್ತೆ )</u>** : ಲೋಕೋಪಯೋಗಿ ಇಲಾಖೆಯು 2020-21 ನೇ ಸಾಲಿನ ಬಜೆಟ್ ನಲ್ಲಿ ಪ್ರವಾಹ ಹಾಗು ಮಳೆಯಿಂದ ಹಾನಿಗೊಳಗಾದ ರಸ್ತೆಗಳ ಮರುನಿರ್ಮಾಣಕ್ಕೆ ಆದ್ಯತೆ ನೀಡಲಾಗುವುದು ಎಂದು ಉಪಮುಖ್ಯಮಂತ್ರಿಗಳಾದ ಗೋವಿಂದ ಎಂ ಕಾರಜೋಳ ಅವರು ತಿಳಿಸಿದರು.

ವಿಧಾನಸೌಧದಲ್ಲಿಂದು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಪ್ರವಾಹದಿಂದ ಹಾನಿಗೊಳಗಾದ ರಸ್ತೆಗಳನ್ನು ತಾತ್ಕಾಲಿಕವಾಗಿ ನಿರ್ಮಿಸಲಾಗಿದೆ. ಇ ಪ್ರೊಕ್ಯೂರ್‌ಮೆಂಟ್‌ನಿಂದಾಗಿ ಕೆಲವು ಟೆಂಡರ್ ಪ್ರಕ್ರಿಯೆಗೆ ತಾಂತ್ರಿಕವಾಗಿ ವಿಳಂಭವಾಗಿದೆ. ಈ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಲಾಗುವುದು. ಈ ಆಯವ್ಯಯದಲ್ಲಿ ಈ ಕಾಮಗಾರಿಗಳಿಗೆ ಮರುನಿರ್ಮಾಣ ಮಾಡಲಾಗುವುದು. ಫಾಸ್ಟ್ಯಾಕ್ ನಲ್ಲಿ ಸಂಭವಿಸುತ್ತಿರುವ ಕೆಲವು ನ್ಯೂನತೆಗಳ ಕುರಿತು ಕೇಂದ್ರ ಭೂಸಾರಿಗೆ ಸಚಿವರಾದ ಶ್ರೀ ನಿತಿನ್ ಗಡ್ಕರಿ ಅವರ ಗಮನಕ್ಕೆ ತರಲಾಗಿದೆ ಎಂದು ಅವರು ತಿಳಿಸಿದರು.

ರಾಜ್ಯದಲ್ಲಿ 94 ಅಪಘಾತ ಸ್ಥಳಗಳೆಂದು ಗುರುತಿಸಿದ್ದು, ಈ ಸ್ಥಳಗಳನ್ನು ಬ್ಲಾಕ್‌ಸ್ಪಾಟ್ ಎಂದು ಗುರುತಿಸಲಾಗಿದೆ. ಲೋಕೋಪಯೋಗಿ ಇಲಾಖೆಯ 249, ಕೆಶಿಪ್ ನ 20, ರಸ್ತೆ ಸಾರಿಗೆ ನಿಗಮದ 2, ರಾಷ್ಟ್ರೀಯ ಹೆದ್ದಾರಿಯ 172, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ 392, ರಾಷ್ಟ್ರೀಯ ಹೆದ್ದಾರಿಹಾಗು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ 69, ಬಿಬಿಎಂಪಿಯ 31, ಬೆಳಗಾವಿಯ ಮಹಾನಗರ ಪಾಲಿಕೆಯ 2, ತುಮಕೂರು ಮಹಾನಗರ ಪಾಲಿಕೆಯ 3 ಸ್ಥಳಗಳೆಂದು ಗುರುತಿಸಲಾಗಿದೆ. ಈ ಅಪಘಾತ ಸ್ಥಳಗಳಲ್ಲಿ ರಸ್ತೆಯ ಜಾಗವನ್ನು ವಿಸ್ತರಿಸಿ, ಅಪಘಾತ ತಡೆಗೆ ಕ್ರಮಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು.

### ಹೊಸವರ್ಷದ ಶುಭಾಷಯ ಕೋರಿದ ಗೋವಿಂದ ಎಂ ಕಾರಜೋಳ

**<u>ಬೆಂಗಳೂರು, ಡಿಸೆಂಬರ್ 31 ( ಕರ್ನಾಟಕ ವಾರ್ತೆ )</u>** : ರಾಜ್ಯದ ಸಮಸ್ತ ಜನತೆಗೆ ಹೊಸವರ್ಷದ ಹಾರ್ಧಿಕ ಶುಭಾಷಯಗಳು. ಹೊಸ ವರ್ಷವು ರಾಜ್ಯದ ಜನತೆಗೆ ಸಮೃದ್ದಿ ತರಲಿ. ರಾಜ್ಯವನ್ನು ಪ್ರಗತಿಯತ್ತ ಸಾಗಿಸಲಿ. ಮಳೆ ಮತ್ತು ಬೆಳೆಯು ಉತ್ತಮವಾಗಿ ಬರಲಿ. ಎಲ್ಲಾ ರೈತ ಬಾಂದವರು ನೆಮ್ಮದಿಯ ಜೀವನ ಸಾಗಿಸುವಂತಾಗಲಿ. ರಾಜ್ಯದ ಜನತೆಯು ಸುಖ- ಶಾಂತಿಯಿಂದ ಇರುವಂತಾಗಲಿ. ಎಂದು ಉಪಮುಖ್ಯಮಂತ್ರಿಗಳಾದ ಗೋವಿಂದ ಎಂ ಕಾರಜೋಳ ಅವರು ಶುಭಾಷಯ ಕೋರಿದರು.

## ಕರ್ನಾಟಕ ಲೋಕ ಸೇವಾ ಆಯೋಗ – ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ನೇಮಕಾತಿ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

ಬೆಂಗಳೂರು, ಡಿಸೆಂಬರ್ 31 ( ಕರ್ನಾಟಕ ವಾರ್ತೆ ) :

ಕರ್ನಾಟಕ ಲೋಕ ಸೇವಾ ಆಯೋಗವು 2017ನೇ ಸಾಲಿನ ರಾಜ್ಯದ ವಿವಿಧ ಇಲಾಖೆಗಳಲ್ಲಿನ 850 ಹುದ್ದೆಗಳು ಹಾಗೂ ಹೈದ್ರಾಬಾದ್ ಕರ್ನಾಟಕದ 150 ಹುದ್ದೆಗಳು ಸೇರಿದಂತೆ ಒಟ್ಟು 960 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ, ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ತಾತ್ಕಾಲಿಕ ಆಯ್ಕೆ ಪಟ್ಟಿಯ ಅಧಿಸೂಚನೆಯನ್ನು ಆಯೋಗದ ವೆಬ್‌ಸೈಟ್ http://kpsc.kar.nic.in-Lists-Provisional selection listರಡಿಯಲ್ಲಿ ಪ್ರಕಟಿಸಲಾಗಿದೆ.

ತಾತ್ತಕಾಲಿಕ ಆಯ್ಕೆ ಪಟ್ಟಿಯ ಕುರಿತಂತೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ 07 ದಿವಸಗಳೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು–560 001 ಇವರಿಗೆ ಲಿಖಿತವಾಗಿ ಸಲ್ಲಿಸಲು ಸೂಚಿಸಿದೆ. ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕ ಸೇವಾ ಆಯೋಗವು ತಿಳಿಸಿದೆ.

## 2019ನೇ ಸಾಲಿನಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಗೊಂಡ ಆಂಗ್ಲ ಮತ್ತು ಭಾರತೀಯ ಇತರೆ ಭಾಷೆಯ ಪುಸ್ತಕಗಳನ್ನು ರಾಜ್ಯಮಟ್ಟದ ಪುಸ್ತಕ ಆಯ್ಕೆ ಸಮಿತಿಗೆ ಸಲ್ಲಿಸುವ ಕುರಿತು.

ಬೆಂಗಳೂರು, ಡಿಸೆಂಬರ್ 31 ( ಕರ್ನಾಟಕ ವಾರ್ತೆ ) :

2019ನೇ ಸಾಲಿನಲ್ಲಿ ಪ್ರಥಮ ಮುದ್ರಣಕ್ಕಾವಾಗಿ ಪ್ರಕಟವಾದ ಪುಸ್ತಕಗಳನ್ನು ಗ್ರಂಥಸ್ವಾಮ್ಯ ವಿಭಾಗ, ರಾಜ್ಯ ಕೇಂದ್ರ ಗ್ರಂಥಾಲಯ, ಕಬ್ಬನ್ ಉದ್ಯಾನವನ, ಬೆಂಗಳೂರು ಇಲ್ಲಿ ದಿನಾಂಕ: 30–01–2020ರೊಳಗೆ ಕಾಫಿರೈಟ್ ಮಾಡಿಸಿರತಕ್ಕದ್ದು. ಕಾಫಿರೈಟ್ ಮಾಡಿಸಿರುವ ಪುಸ್ತಕಗಳನ್ನು ಆಯ್ಕೆಗಾಗಿ ಅರ್ಜಿಯೊಂದಿಗೆ ಪುಸ್ತಕದ ಒಂದು ಪ್ರತಿಯನ್ನು ಹಾಗೂ ಡಿಜಿಟಲ್ ಗ್ರಂಥಾಲಯ ಸೇವೆಯನ್ನು ಸಾರ್ವಜನಿಕ ಓದುಗರಿಗೆ ಒದಗಿಸಲು ಅನುಕೂಲವಾಗುವಂತೆ ಆಸಕ್ತಿಯುಳ್ಳ ಲೇಖಕರು,  ಲೇಖಕ–ಪ್ರಕಾಶಕರು ಮತ್ತು ಪ್ರಕಟಣಾ ಸಂಸ್ಥೆಗಳು ಪುಸ್ತಕವನ್ನು ಆಯ್ಕೆಗೆ ಸಲ್ಲಿಸುವಾಗ ತಮ್ಮ ಅನುಮತಿ ಪತ್ರದೊಂದಿಗೆ ಸದರಿ ಪುಸ್ತಕದ ಸಾಫ್ಟ್ ಕಾಫಿಯನ್ನು ಸಿ.ಡಿ. ರೂಪದಲ್ಲಿ (ನೋಂದಣಿ ಪತ್ರದ ಪ್ರತಿಯೊಂದಿಗೆ) ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯಗೋಪುರ, 4ನೇ ಮಹಡಿ ಡಾ: ಅಂಬೇಡ್ಕರ್ ವೀಧಿ, ಬೆಂಗಳೂರು – 560 001 ಇಲ್ಲಿಗೆ ದಿನಾಂಕ:

**31–01–2020ರೊಳಗೆ ಸಲ್ಲಿಸುವುದು. ತದನಂತರ ಬಂದ ಯಾವುದೇ ಪುಸ್ತಕಗಳನ್ನು ಸ್ವೀಕರಿಸಲಾಗುವುದಿಲ್ಲ. ನಿಗದಿತ ಅರ್ಜಿ ನಮೂನೆ ಮತ್ತು ನಿಬಂಧನೆಗಳ ಮಾಹಿತಿಗಾಗಿ ಇಲಾಖಾ ಅಂತರ್ಜಾಲ www.karnatakapubliclibrary.gov.in ಹಾಗೂ ರಾಜ್ಯದ ಎಲ್ಲಾ ಜಿಲ್ಲಾ / ನಗರ ಕೇಂದ್ರ ಗ್ರಂಥಾಲಯಗಳ ಉಪನಿರ್ದೇಶಕರು / ಮುಖ್ಯ ಗ್ರಂಥಾಲಯಾಧಿಕಾರಿಗಳ ಕಛೇರಿಯಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂ. 080–22864990, 228667358 ಸಂಪರ್ಕಿಸಲು ಕೋರಿದೆ.**